ಅವುಟೂರು ಗ್ರಾಮದಲ್ಲಿ ಕುಡಿಯುವ ನೀರಿನ ಬಗ್ಗೆ

೮೭೫. ಶ್ರೀ ಶಿವಾನಂದ ಎಚ್. ಕೌಜಲಗಿ(ಬೈಲಹೊಂಗಲ).—ಮಾನ್ಯ ಗ್ರಾಮೀಣಾಭಿವೃದ್ಧಿ, ವಸತಿ ಮಂತ್ರಿ ವಕ್ಫ್ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನ ಅವುಟೂರ ಗ್ರಾಮದಲ್ಲಿ ಕುಡಿಯುವ ನೀರಿನ ತೊಂದರೆ ಇರುವುದು ಸರಕಾರದವರ ಗಮನಕ್ಕೆ ಬಂದಿದೆಯೇ ?

ಆ) ಸದರೀ ತೊಂದರೆಯನ್ನು ನಿವಾರಿಸಲು ಸರಕಾರದವರು ಕೈಗೊಂಡ ಕ್ರಮವೇನು ?

ಶ್ರೀ ಅಬ್ದುಲ್ ನಜೀರ್ ಸಾಬ್(ಗ್ರಾಮೀಣಾಭಿವೃದ್ಧಿ, ವಸತಿ ಮಂತ್ರಿ ವಕ್ಫ್ ಮಂತ್ರಿಗಳು).—

ಅ) ಬಂದಿದೆ.

ಆ) ಬೈಲಹೊಂದಲ ತಾಲ್ಲೂಕಿನ ಅವುಟೂರ ಗ್ರಾಮದಲ್ಲಿ ವಿವಿಧ ಕಾರ್ಯಕ್ರಮಗಳಡಿಯಲ್ಲಿ ೪ ಕೊಳವೆ ಭಾವಿಗಳನ್ನು ಕೊರೆದಿದ್ದು ೩ ಯಶಸ್ವಿಯಾಗಿವೆ. ಅವುಗಳಿಗೆ ಕೈಪಂಪು ಅಳವಡಿಸಿ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿವೆ.

ಈ ಗ್ರಾಮಕ್ಕೆ ಒಂದು ಎನ್.ಆರ್.ಡಬ್ಲ್ಯೂ.ಎಸ್. ಯೋಜನೆ ಮಂಜೂರಾಗಿದ್ದು ಅವಲಂಬಿಸತಕ್ಕ ಜಲಮೂಲ ಸ್ಥಿರಪಡಿಸಲು ೨ ಕೊಳವೆ ಭಾವಿಗಳನ್ನು ಕೊರೆಯಲಾಗಿತ್ತು. ಆದರೆ ಅವುಗಳ ಇಳುವರಿಯು ಕಡಿಮೆ ದೊರಕಿರುವುದರಿಂದ ಬೇರೆ ಜಲ ಮೂಲ ಸ್ಥಿರ ಪಡಿಸಿ ಯೋಜನೆಯನ್ನು ಕಾರ್ಯಗತಗೊಳಿಸಲು ಕ್ರಮ ತೆಗೆದುಕೊಳ್ಳಲಾಗುತ್ತದೆ.

ಗೋವನ ಕೊಪ್ಪ ಗ್ರಾಮದಲ್ಲಿ ಕುಡಿಯುವ ನೀರಿನ ಬಗ್ಗೆ

೮೭೬. ಶ್ರೀ ಶಿವಾನಂದ ಹೆಚ್. ಕೌಜಲಗಿ(ಬೈಲಹೊಂಗಲ).—ಮಾನ್ಯ ಗ್ರಾಮೀಣಾಭಿವೃದ್ಧಿ, ವಸತಿ ಮಂತ್ರಿ ವಕ್ಫ್ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನ ಗೋವನ ಕೊಪ್ಪ ಗ್ರಾಮದಲ್ಲಿ ಕುಡಿಯುವ ನೀರಿನ ತೊಂದರೆ, ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ಸರ್ಕಾರದವರು ಅದನ್ನು ನಿವಾರಿಸಲು ಯಾವ ಕ್ರಮವನ್ನು ಕೈಗೊಳ್ಳಲಾಗಿದೆ ?

ಶ್ರೀ ಅಬ್ದುಲ್ ನಜೀರ್ ಸಾಬ್(ಗ್ರಾಮೀಣಾಭಿವೃದ್ಧಿ, ವಸತಿ ಮತ್ತು ವಕ್ಫ್ ಮಂತ್ರಿಗಳು).—

ಅ) ಬಂದಿದೆ.

ಆ) ಗೋವನಕೊಪ್ಪ ಗ್ರಾಮದಲ್ಲಿ ಮೊದಲಿನಿಂದ ಫೆಬ್ರವರಿ ೮೭ರ ಅಂತ್ಯದವರೆಗೆ ವಿವಿಧ ಕಾರ್ಯಕ್ರಮಗಳಲ್ಲಿ ೫ ಕೊಳವೆ ಬಾವಿಗಳನ್ನು ತೋಡಲಾಗಿದ್ದು ಅವುಗಳ ಪೈಕಿ ೩ ಕೊಳವೆ ಬಾವಿಗಳು ಯಶಸ್ವಿಯಾಗಿ ಕೈಪಂಪುಗಳನ್ನು ಅಳವಡಿಸಲಾಗಿದೆ ಮತ್ತು ಕಾರ್ಯಚರಣೆಯಲ್ಲಿವೆ.

ಈ ಗ್ರಾಮಕ್ಕೆ ಗ್ರಾಮೀಣ ನೀರು ಸರಬರಾಜು ಯೋಜನೆಯು ಮಂಜೂರಾಗಿದ್ದು ತೋಡು ಬಾವಿಯನ್ನು ಜಲಮೂಲವನ್ನಾಗಿ ಪರಿಗಣಿಸಿ ೧೯೭೪ರಲ್ಲಿ ಕೆಲಸಗಳನ್ನು ಮುಗಿಸಲಾಗಿದೆ. ಈ ಯೋಜನೆಯು ಚಾಲನೆಯಲ್ಲಿತ್ತು, ಆದರೆ ಸದ್ಯ ತೋಡು ಬಾವಿಯಲ್ಲಿ ಇಳುವರಿ ಬಹಳ ಕಡಿಮೆಯಾಗಿ ನೀರು ಸರಬರಾಜು ಯೋಜನೆ ಸ್ಥಗಿತಗೊಂಡಿದೆ.

ಜಿಲ್ಲಾಧಿಕಾರಿಗಳು ಒದಗಿಸಿದ ಆನುದಾನದಿಂದ ಕೊಳವೆ ಬಾವಿಗಳ ಯೋಜನೆಯಡಿಯಲ್ಲಿ ಒಂದು ಕೊಳವೆ ಬಾವಿಯನ್ನು ಕೊರೆದು ನಿಷ್ಕ್ರಿಯ ರಾಜ್ಯ ಗ್ರಾಮೀಣ ನೀರು ಸರಬರಾಜು ಯೋಜನೆಯನ್ನು ಪುನರುಜ್ಜೀವನಗೊಳಿಲು ಕ್ರಮ ಕೈಗೊಳ್ಳಲಾಗಿದೆ.